**ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.**

**ಸಿ.ಸಿ.ನಂ.448/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | ಶಿವಲಿಂಗಪ್ಪ ಯಾದವಾಡ | ಸಿಡಬ್ಲ್ಯೂ | 2 |
| ತಂದೆ ಹೆಸರು | ಷಣ್ಮುಖಪ್ಪ | ಪಿಡಬ್ಲ್ಯೂ | 4 |
| ವಯಸ್ಸು | 69 ವರ್ಷ | | |
| ಉದ್ಯೋಗ | ಏನೂ ಇಲ್ಲ | | |
| ವಾಸಸ್ಥಳ | ಹಾವೇರಿ | | |

**ದಿಃ 11.03.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಹಿ.ಸ.ಸ.ಅಭಿಯೋಜಕರಿಂದ.**

1). ಚಾ.ಸಾ-3 ಮತ್ತು ಆರೋಪಿಯ ಪರಿಚಯ ಇರುವದಿಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಇರುವದಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಘಟನಾ ಸ್ಥಳದ ಪಂಚನಾಮೆಯಾಗಿದ್ದು, ಅದನ್ನು ನಿ.ಪಿ-4 ಎಂದು , ಸಾಕ್ಷಿಯ ಸಹಿಯನ್ನು ನಿ.ಪಿ-4(ಎ) ಎಂದು ಗುರುತಿಸಲಾಯಿತು. ನಿ.ಪಿ-4 ದಾಖಲಾತಿಗೆ ಯಾವಾಗ ಮತ್ತು ಎಲ್ಲಿ ಮತ್ತು ಯಾವ ವಿಷಯಕ್ಕೆ ಸಂಬಂಧಿಸಿದಂತೆ ಸಹಿ ಮಾಡಿದ್ದೇನೆ ಎಂದು ಹೇಳಲು ಆಗುವದಿಲ್ಲ, ಅದರಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿರುವದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ, ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಹಿ.ಸ.ಸ.ಅಭಿಯೋಜಕರಿಂದ.**

2) ನಿ.ಪಿ-4 ದಾಖಲಾತಿಯಲ್ಲಿ ಬರೆದಿರುವ ಎಲ್ಲ ಸಂಗತಿಗಳು ನನಗೆ ಗೊತ್ತಿದ್ದರೂ ಸಹ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ನನಗೆ ಈ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರೂ ಸಹ ನಾನು ಆ ಕುರಿತಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ

ಸಿ.ಡಬ್ಲೂ-2, ಪಿ.ಡಬ್ಲೂ-4

ಸರಿಯಲ್ಲ. ಆರೋಪಿಯು ಸರ್ಕಾರಕ್ಕೆ ರೂ.1,10,808/- ಗಳಷ್ಟು ನಷ್ಟವನ್ನುಂಟು ಮಾಡಿ ಮೋಸ ಮಾಡಿದ್ದಾರೆ ಅಂದರೆ ನನಗೆ ಗೊತ್ತಿರುವದಿಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲು ಇರುವದಿಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.